KARNATAKA STATE BOARD OF AUQAF
11 APR 2017
40
BANGALORE - 560 052

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2016-17ನೇ ಸಾಲಿನಲ್ಲಿ ಜಿಲ್ಲೆಯ ವಕ್ಫ್ ಸ್ವತ್ತುಗಳ ಸಂರಕ್ಷಣೆ ಹಾಗೂ ಜೀರ್ಣೋದ್ಧಾರಕ್ಕಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

******

ಓದಲಾಗಿದೆ :

1) ಸರ್ಕಾರಿ ಆದೇಶ ಸಂಖ್ಯೆ: MWD 155 WES 2011(P) ದಿನಾಂಕ:28-04-2011
2) ಸರ್ಕಾರಿ ಆದೇಶ ಸಂಖ್ಯೆ: MWD 124 MDS 2016,ದಿನಾಂಕ: 03-05-2016, 24-08-2016 ಹಾಗೂ 21-11-2016.
3) ಸರ್ಕಾರಿ ಆದೇಶ ಸಂಖ್ಯೆ: MWD 13 WGA 2016,ದಿನಾಂಕ:27-12-2016
4) ಸರ್ಕಾರಿ ಆದೇಶ ಸಂಖ್ಯೆ: MWD 16 WGA 2016,ದಿನಾಂಕ:17-01-2017
5) ಸರ್ಕಾರಿ ಆದೇಶ ಸಂಖ್ಯೆ: MWD 22 WGA 2016,ದಿನಾಂಕ:24-01-2017
6) ಸರ್ಕಾರಿ ಆದೇಶ ಸಂಖ್ಯೆ: MWD 18 WGA 2016,ದಿನಾಂಕ:17-02-2017
7) ಮುಖ್ಯಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಇವರ ಪತ್ರ ಸಂಖ್ಯೆ:KSBA/DEV/SPG/36/CNR/2016-17,ದಿನಾಂಕ:30-01-2017.

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಕರ್ನಾಟಕ ರಾಜ್ಯದ ವಕ್ಫ್ ಆಸ್ತಿಗಳಾದ ಖಬರಸ್ಥಾನ, ಈದ್ಗಾದ ಜಾಗಗಳನ್ನು ಅಕ್ರಮ ಒತ್ತುವರಿ, ಅನಧೀಕೃತ ಸ್ವಾಧೀನ ಮತ್ತು ವಿವಾದಗಳಿಂದ ಉದ್ಭವಿಸುತ್ತಿರುವ ಸಮಸ್ಯೆಗಳನ್ನು ತಡೆಯಲು ಆಸ್ತಿಗಳ ಸುತ್ತ ಬೇಲಿ/ಗೋಡೆಯನ್ನು ಹಾಕುವುದು ಅತ್ಯವಶ್ಯಕವಾಗಿರುತ್ತದೆ. ಅದನ್ನು ಸಂರಕ್ಷಣೆ ಮಾಡುವ ಯೋಜನೆಯಡಿ ಕೆಲವು ನಿಬಂಧನೆಗಳನ್ನು ರೂಪಿಸಿ ಆದೇಶ ಹೊರಡಿಸಲಾಗಿರುತ್ತದೆ.

ಮೇಲೆ (2)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ವಕ್ಫ್ ಸಂಪತ್ತಿನ ರಕ್ಷಣೆಗಾಗಿ 2016-17ನೇ ಸಾಲಿಗೆ ಲೆಕ್ಕ ಶೀರ್ಷಿಕೆ 2225-03-102-0-13(059) (ಯೋಜನೆ) ರಡಿಯಲ್ಲಿ ಸರ್ಕಾರವು ರೂ.1000.00ಲಕ್ಷಗಳ ಅನುದಾನವನ್ನು ನಿಗಧಿಪಡಿಸಿ ಮೊದಲನೇ, ಎರಡನೇ ಹಾಗೂ ಮೂರನೇ ತ್ರೈಮಾಸಿಕ ಕಂತಿನ ಅನುದಾನ ಒಟ್ಟು ರೂ.750.00ಲಕ್ಷ ಮಂಜೂರು ಮಾಡಲಾಗಿದೆ.

ಸದರಿ ಅನುದಾನದಲ್ಲಿ ಮೇಲೆ (3)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಐಗಳ ಗ್ರಾಮದ ಖಬರಸ್ಥಾನಕ್ಕೆ ಕಾಂಪೌಂಡ್ ಗೋಡೆ ನಿರ್ಮಿಸಲು ರೂ.16.50ಲಕ್ಷ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ,

ಮೇಲೆ (4) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ 25 ಜಿಲ್ಲೆಗಳ 303 ವಕ್ಫ್ ಸಂಸ್ಥೆಗಳಿಗೆ ಕಾಂಪೌಂಡ್ ಗೋಡೆ ನಿರ್ಮಾಣಕ್ಕಾಗಿ ರೂ.7,49,50,000/-ಗಳನ್ನು ಬಿಡುಗಡೆ ಮಾಡಲಾಗಿರುತ್ತದೆ.